2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರವರ ನ್ಯಾಯಾಲಯದಲ್ಲಿ,
ಚಿಕ್ಕಮಗಳೂರು

ಸತ್ರ ಮೊಕದ್ದಮೆ ನಂಃ 118/2016

| | | | |
|---|---|---|---|
| ಸಾಕ್ಷಿದಾರರ ಹೆಸರು | - | ರವಿ ಎನ್ ಎನ್ | ಪಿಡಬ್ಲೂ -16 |
| ತಂದೆಯ ಹೆಸರು | - | ನಿಂಗಪ್ಪ | ಸಿಡಬ್ಲೂ - 28 |
| ವಯಸ್ಸು | - | 39 ವರ್ಷ | |
| ಉದ್ಯೋಗ | - | ಪಿ ಎಸ್ ಐ,<br>ಮೆಸ್ಕಾಂ ಜಾಗೃತ ದಳ, ಶಿವಮೊಗ್ಗ | |
| ವಾಸ ಸ್ಥಳ | - | ಶಿವಮೊಗ್ಗ | |

ದಿನಾಂಕಃ 24.07.2023 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸರ್ಕಾರಿ ಅಭಿಯೋಜಕರಿಂದಃ

1. ನಾನು 2015 ನೇ ಇಸವಿ ಜೂನ್ ತಿಂಗಳಿನಿಂದ 2016 ನೇ ಇಸವಿ ಏಪ್ರಿಲ್ ತಿಂಗಳಿನವರೆಗೆ ನ.ರಾ.ಪುರ ಪೊಲೀಸ್ ಠಾಣೆಯಲ್ಲಿ ಪೊಲೀಸ್ ಉಪ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

2. ದಿನಾಂಕಃ 29.10.2015 ರಂದು ನಾನು ಠಾಣೆಯಲ್ಲಿದ್ದ ಸಮಯದಲ್ಲಿ ಮಧ್ಯಾಹ್ನ 3.00 ಗಂಟೆಗೆ ಫ್ರಾಸಾ.1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು ಪಡೆದು ಠಾಣಾ ಮೊಕದ್ದಮೆ ಸಂಖ್ಯೆಃ 135/2015 ರಂತೆ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ

ದೂರನ್ನು ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.1(ಸಿ) ಎಂದು ಗುರುತಿಸಲಾಯಿತು. ನಾನು ದಾಖಲು ಮಾಡಿದ್ದ ಪ್ರಥಮ ವರ್ತಮಾನ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ.39 ಎಂದು ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ.39 (ಎ) ಎಂದು ಗುರುತಿಸಲಾಯಿತು.

3. ಪ್ರಕರಣವು ಘೋರ ಅಪರಾಧವನ್ನೊಳಗೊಡಿಂದ್ದರಿಂದ ಪ್ರಕರಣದ ಕಡತವನ್ನು ಚಾಸಾ.29 ರವರಿಗೆ ನೀಡಿರುತ್ತೇನೆ.

ಪಾಟೀ ಸವಾಲುಃ ಶ್ರೀ ಹೆಚ್ ಎ ಟಿ ವಕೀಲರಿಂದ – 1 ರಿಂದ 5 ನೇ ಆರೋಪಿತರ ಪರವಾಗಿ

4. ಘಟನೆ ನಡೆದಿದೆ ಎನ್ನಲಾದ ಸ್ಥಳದಿಂದ ನಿಮ್ಮ ಠಾಣೆಗೆ ಎಷ್ಟು ದೂರವಾಗುತ್ತದೆ ಎಂದರೆ ಸಾಕ್ಷಿ ಸುಮಾರು 8 ಕಿಲೋ ಮೀಟರ್ ದೂರವಾಗುತ್ತದೆ ಎನ್ನುತ್ತಾರೆ. ನ.ರಾ.ಪುರ ಪೊಲೀಸ್ ಠಾಣೆಯ ಪಕ್ಕದಲ್ಲಿಯೇ ಸರ್ಕಾರಿ ಆಸ್ಪತ್ರೆ ಇದೆ ಎಂದರೆ ಸಾಕ್ಷಿ ಸ್ವಲ್ಪ ದೂರದಲ್ಲಿ ಇದೆ ಎನ್ನುತ್ತಾರೆ. ಸದರಿ ಆಸ್ಪತ್ರೆಯಿಂದ ದಿನಾಂಕಃ 28.10.2015 ರಂದು ನಮ್ಮ ಠಾಣೆಗೆ ಯಾವುದೇ ಮಾಹಿತಿ ಬಂದಿಲ್ಲ. ದೂರನ್ನು ಸ್ವೀಕರಿಸಿ ಪ್ರಥಮ ವರ್ತಮಾನ ವರದಿಯನ್ನು ದಾಖಲಿಸುವ ಸಮಯಕ್ಕೆ ನಾನು ಯಾವುದೇ ದಾಖಲೆಯನ್ನು ಪರಿಶೀಲಿಸಿಲ್ಲ.

5. ನೀವು ಹೇಳಿದಂತೆ ಫ್ರಾಸಾ.1 ರವರು ಠಾಣೆಗೆ ಹಾಜರಾಗಿ ಯಾವುದೇ ದೂರನ್ನು ನೀಡದೇ ಇದ್ದರೂ ಸಹ ಮತ್ತು ಆರೋಪಿತರು ಯಾವುದೇ ತಪ್ಪನ್ನು ಮಾಡದೇ ಇದ್ದರೂ ಸಹ ಮೇಲಾಧಿಕಾರಿಗಳ ಮಾತು ಕೇಳಿ ಆರೋಪಿತರ ವಿರುದ್ಧ ಸುಳ್ಳು

ಪ್ರಕರಣವನ್ನು ದಾಖಲಿಸಿ ಸುಳ್ಳು ಸಾಕ್ಷ್ಯನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲುಃ 6 ನೇ ಆರೋಪಿ ಪರವಾಗಿ ಶ್ರೀ ಐ ಎಸ್ ಟಿ ವಕೀಲರು ಮೇಲಿನ ಪಾಟೀ ಸವಾಲನ್ನು ಅಳವಡಿಸಿಕೊಂಡಿರುತ್ತಾರೆ.

ಮರು ವಿಚಾರಣೆಃ ಇಲ್ಲ

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯ್ತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
2 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ

ಹೆಚ್